**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆಃ 1304/2023**

**ಪಿರ್ಯಾದಿದಾರರುಃ** ರಾಜ್ಯ ಪರ ಪೊಲೀಸರು,
ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ

**ವಿರುದ್ದ**

**ಆರೋಪಿತರುಃ** ಗಿರೀಶ್ ಜಿ.ಎಂ ಉಃ ಗಿರಿ ಬಿನ್ ಮಂಜೇಗೌಡ

**ದೋಷಾರೋಪಣೆ**

**ಶ್ರೀಮತಿ ಕುಸುಮ ವಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಚನ್ನರಾಯಪಟ್ಟಣ ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಹೊರಿಸುವ ದೋಷಾರೋಪಣೆ ಏನೆಂದರೆ,

ಚನ್ನರಾಯಪಟ್ಟಣ ನಗರ ಠಾಣಾ ವ್ಯಾಪ್ತಿಗೆ ಸೇರಿದ ಚನ್ನರಾಯಪಟ್ಟಣ ಟೌನ್ ಓಲ್ಡ್ ಪೋಸ್ಟ್ ಆಫೀಸ್ ರೋಡಿನಲ್ಲಿರುವ ಸಾಕ್ಷಿ.1 ರವರ ಮನೆಯನ್ನು ಆರೋಪಿಯಾದ ನೀವು ದಿನಾಂಕಃ 27.07.2023 ರಂದು ಸಂಜೆ ಸುಮಾರು 5.00 ಗಂಟೆಯ ಸಮಯದಲ್ಲಿ ಕಬ್ಬಿಣದ ರಾಡಿನಿಂದ ಮೀಟಿ ಮನೆಯ ಹಿಂಭಾಗದ ಡೋರ್‌ನ್ನು ಮುರಿದು ಒಳಗೆ ಪ್ರವೇಶ ಮಾಡಿ, ಆ ಮೂಲಕ ಆರೋಪಿತರಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 454** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

2) ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ, ಆರೋಪಿತರಾದ ನೀವು, ಸದರಿ ಮನೆಯ ಒಳಗೆ ಹೋಗಿ ಕಬ್ಬಿಣದ ಬೀರುವನ್ನು ಮುರಿದು ಬೀರುವಿನಲ್ಲಿ ಇಟ್ಟಿದ್ದ 1.600 ಗ್ರಾಂ ತೂಕದ ಒಂದು ಚಿನ್ನದ ಉಂಗುರು, 112.600 ಗ್ರಾಂ ತೂಕದ ಬೆಳ್ಳಿ ಕಾಲ್ಚೈನು, 18.800 ಗ್ರಾಂ ತೂಕದ ಬೆಳ್ಳಿಯ ಮೂರು ಮಕ್ಕಳ ಕೈಬಳೆಗಳನ್ನು ಕಳವು ಮಾಡಿಕೊಂಡು ಹೋಗಿ, ಆ ಮೂಲಕ ಆರೋಪಿತರಾದ ನೀವು

**ಭಾರತೀಯ ದಂಡ ಸಂಹಿತೆ ಕಲಂ: 380** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**ಪ್ರಶ್ನೆ:** 1. ಈಗ ನಿಮಗೆ ಓದಿ ಹೇಳಲಾದ ನಿಮ್ಮ ಮೇಲಿನ ದೋಷಾರೋಪಣೆ ನಿಮಗೆ ತಿಳಿಯಿತೆ?

ಆರೋಪಿಯ ಉತ್ತರ:

**ಪ್ರಶ್ನೆ:** 2. ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ನಡೆಯಲೆಂದು ಬಯಸುತ್ತೀರಾ?

ಆರೋಪಿಯ ಉತ್ತರ:

(ಈ ದೋಷರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿ/ಗಳಿಗೆ ತಿಳಿದಿರುವ ಭಾಷೆಯಲ್ಲಿ ಓದಿ ಹೇಳಿ ಕೇಳಲಾಗಿ ಆರೋಪಿ/ಗಳು ನೀಡಿರುವ ಉತ್ತರಗಳನ್ನು ಪಡೆದುಕೊಂಡಿದ್ದು ಅವು ಸರಿ ಇವೆ ಎಂದು ದೃಢೀಕರಿಸಲಾಯಿತು)

ದಿನಾಂಕ: **29.01.2026**

(ಶ್ರೀಮತಿ ಕುಸುಮ ವಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.